## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಸುನೀಲಗೌಡ ಬಿ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರು ನಿಯಮ 72 ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ: 05 ಕ್ಕೆ ಉತ್ತರ

**ಸೂಚನೆ:-**

ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳು, ನಗರಸಭೆಗಳು, ಪುರಸಭೆಗಳು ಮತ್ತು ಪಟ್ಟಣ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಬಹಳ ವರ್ಷಗಳಿಂದ ಆಸ್ತಿ ತೆರಿಗೆ ಪಾವತಿಸಿದೇ ಕಟಬಾಕಿದಾರರು ಬಹಳಷ್ಟಿದ್ದು, ಸದರಿಯವರಿಗೆ ವಿಧಿಸಲಾಗುತ್ತಿರುವ ಬಡ್ಡಿ ಹಾಗೂ ಆಸ್ತಿ ತೆರಿಗೆಯಿಂದ ತೀವ್ರ ಆರ್ಥಿಕ ಹೊರೆಯಾಗಿ ತೆರಿಗೆದಾರರು ತೆರಿಗೆ ಪಾವತಿಸದೇ ಇರುವುದರಿಂದ ನಗರ ಸ್ಥಳೀಯ ಸಂಸ್ಥೆಗಳು ಆದಾಯವಿಲ್ಲದೆ ಸೊರಗುತ್ತಿದೆ.

ಆದ್ದರಿಂದ, ಬಿ.ಬಿ.ಎಂ.ಪಿ ವ್ಯಾಪ್ತಿಯ ಸಾರ್ವಜನಿಕರಿಗೆ ನೀಡಿದಂತೆಯೇ, ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳು, ನಗರಸಭೆಗಳು, ಪುರಸಭೆಗಳು, ಪಟ್ಟಣ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ನಗರ ಸ್ಥಳೀಯ ಸಂಸ್ಥೆಗಳ ಆದಾಯದ ದೃಷ್ಟಿಯಿಂದ ಕಾಲಾವಕಾಶ ನೀಡಿ ಒಂದು ಬಾರಿ ಪರಿಹಾರ (OTS) ಯೋಜನೆಯನ್ನು ಜಾರಿಗೊಳಿಸುವ ಕುರಿತು.

**ಉತ್ತರ:-**

ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳು, ನಗರಸಭೆಗಳು, ಪುರಸಭೆಗಳು ಮತ್ತು ಪಟ್ಟಣ ಪಂಚಾಯಿತಿಗಳ ವ್ಯಾಪ್ತಿಯಲ್ಲಿನ ತೆರಿಗೆದಾರರಿಗೆ ತೆರಿಗೆ ಹೊರೆ / ಆರ್ಥಿಕ ಹೊರೆ ಕಡಿಮೆ ಮಾಡಲು ಕರ್ನಾಟಕ ಪುರಸಭೆಗಳ ಅಧಿನಿಯಮ 1964ರ ಕಲಂ 105ರಡಿ ಮತ್ತು ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976ರ ಕಲಂ 112(ಎ)ರಡಿ ಪ್ರತಿ ಆರ್ಥಿಕ ವರ್ಷದ ಪ್ರಾರಂಭದ 30 ದಿನಗಳಲ್ಲಿ ಪೂರ್ಣ ಪ್ರಮಾಣದ ಆಸ್ತಿ ತೆರಿಗೆ ಪಾವತಿ ಮಾಡಿದ್ದಲ್ಲಿ ಶೇ.5 ರಷ್ಟು ರಿಯಾಯಿತಿಯನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ. ಸದರಿ ಅವಕಾಶವನ್ನು 2024-25ನೇ ಸಾಲಿನ ಆರ್ಥಿಕ ವರ್ಷದಲ್ಲಿ ಸೆಪ್ಟೆಂಬರ್ 2024 ರವರೆಗೂ ವಿಸ್ತರಿಸಲಾಗಿತ್ತು.

ಆಸ್ತಿ ತೆರಿಗೆ ಸಂಗ್ರಹಣೆಯನ್ನು ಸರಳೀಕರಿಸುವ ನಿಟ್ಟಿನಲ್ಲಿ ಬಿ.ಬಿ.ಎಂ.ಪಿ ಮಾದರಿಯಲ್ಲಿ ಒಂದು ಬಾರಿ ಪರಿಹಾರ (OTS) ಯೋಜನೆಯನ್ನು ಇತರೆ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಜಾರಿಗೊಳಿಸುವ ಬಗ್ಗೆ ಪ್ರಸ್ತುತ ಸರ್ಕಾರದ ಹಂತದಲ್ಲಿ ಯಾವುದೇ ಪ್ರಸ್ತಾವನೆ ಇಲ್ಲುವುದಿಲ್ಲ.

**ನಅಇ 206 ಎಂಎನ್‌ಇ 2024 (ಇ)**

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಹಾಗೂ ನಗರ ಯೋಜನೆ
ಸಚಿವರು